A-PDF Merger DEMO : Purchase from www.A-PDF.com to remove the watermark

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಕರ್ನಾಟಕ ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮವನ್ನು 'ಕರ್ನಾಟಕ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮ' ಎಂದು ಮರುನಾಮಕರಣ ಮಾಡುವ ಬಗ್ಗೆ.

ಉಲ್ಲೇಖ- ಪತ್ರ ಸಂಖ್ಯೆ:ಕಪಪಅನಿ:ಸಿಆ:ಸಿಆರ್- :2012-13/4652,ದಿನಾಂಕ 24-01-2013.

*****

ಪ್ರಸ್ತಾವನೆ:-

ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮ, ಬೆಂಗಳೂರು ಇವರು ಮೇಲೆ ಓದಲಾದ ಪತ್ರದಲ್ಲಿ ರಾಜ್ಯ ಸರ್ಕಾರವು ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮವನ್ನು 2006 ರಲ್ಲಿ ಸ್ಥಾಪನೆಗೊಂಡು, ದಿನಾಂಕ 22-02-2007 ರಿಂದ ಸ್ವತಂತ್ರವಾಗಿ ಕಾರ್ಯನಿರ್ವಹಿಸುತ್ತಿದೆ. ಈ ನಿಗಮವು ರಾಜ್ಯದಲ್ಲಿನ ಪರಿಶಿಷ್ಟ ಪಂಗಡದವರ ಆರ್ಥಿಕ ಅಭಿವೃದ್ಧಿಗಾಗಿ ಅನೇಕ ಕಲ್ಯಾಣ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವಲ್ಲಿ ಕಾರ್ಯೋನ್ಮುಖವಾಗಿದೆ. ರಾಜ್ಯದಲ್ಲಿನ ಪರಿಶಿಷ್ಟ ಪಂಗಡದವರ ಮೂಲ ಪುರುಷ ವಾಲ್ಮೀಕಿ. ಇವರ ಜಯಂತಿಯನ್ನು ಪ್ರತಿ ವರ್ಷ ದಿನಾಂಕ 22ನೇ ನವೆಂಬರ್‌ರಂದು ಸರ್ಕಾರದ ಕಾರ್ಯಕ್ರಮವಾಗಿ ಆಚರಿಸಲಾಗುತ್ತಿದೆ. ಇತರೇ ಅಭಿವೃದ್ಧಿ ನಿಗಮಗಳಾದ ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮವನ್ನು 'ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ'ವೆಂದು, ಕರ್ನಾಟಕ ಪರಿಶಿಷ್ಟ ಜಾತಿ ಅಭಿವೃದ್ಧಿ ನಿಗಮವನ್ನು 'ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ'ವೆಂದು, ಮತ್ತು ಕರ್ನಾಟಕ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮವನ್ನು 'ಬಾಬು ಜಗಜೀವನರಾಮ್ ಅಭಿವೃದ್ಧಿ ನಿಗಮ'ವೆಂದು ಮರು ನಾಮಕರಣ ಮಾಡಿರುತ್ತದೆ, ಇದೇ ರೀತಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮವನ್ನು "ಕರ್ನಾಟಕ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮ" ವೆಂದು ಮರು ನಾಮಕರಣ ಮಾಡುವಂತೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸರ್ಕಾರವು ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಮುಂದಿನಂತೆ ಆದೇಶಿಸಿದೆ.

## ಸರ್ಕಾರಿ ಆದೇಶ ಸಂಖ್ಯೆ:ಸಕಇ 36 ಎಸ್‌ಡಿಸಿ 2013,
## ಬೆಂಗಳೂರು, ದಿನಾಂಕ: 08/03/2013.

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ "ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ"ವನ್ನು "ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ" ವೆಂದು ಮರು ನಾಮಕರಣ ಮಾಡಲು ಮಂಜೂರಾತಿ ನೀಡಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಅದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ.

(ವಿ ರತ್ನಮ್ಮ )
ಸರ್ಕಾರದ ಅಧೀನ ಕಾರ್ಯದರ್ಶಿ-2
ಸಮಾಜ ಕಲ್ಯಾಣ ಇಲಾಖೆ.

ಗೆ:-

1) ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ,ಬೆಂಗಳೂರು ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಮತ್ತು 100 ಪ್ರತಿಗಳನ್ನು ಸರ್ಕಾರದ ಅಧೀನ ಕಾರ್ಯದಶಿ-3, ಇವರಿಗೆ ಕಳುಹಿಸಿಕೊಡಲು ಕೋರಿದೆ.

ಪ್ರತಿ:-

(1) ಮಹಾಲೇಖಪಾಲಕರು, (ಲೆಕ್ಕಪತ್ರ/ಲೆಕ್ಕಪರಿಶೋಧನೆ-1 ಮತ್ತು2) ಕರ್ನಾಟಕ, ಬೆಂಗಳೂರು.
(2) ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ,ಬೆಂಗಳೂರು.
(3) ನಿರ್ದೇಶಕರು,ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ,ಬಹುಮಹಡಿ ಕಟ್ಟಡ,ಬೆಂಗಳೂರು.
(4) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ದಿ ನಿಗಮ, ಬೆಂಗಳೂರು.
(5) ವ್ಯವಸ್ಥಾಪಕ ನಿರ್ದೇಶಕರು, ಡಾ:ಬಿ.ಅರ್.ಅಂಬೇಡ್ಕರ್ ಅಭಿವೃದ್ದಿ ನಿಗಮ, ಬೆಂಗಳೂರು
(6) ವ್ಯವಸ್ಥಾಪಕ ನಿರ್ದೇಶಕರು, ಬಾಬು ಜಗಜೀವನ ರಾಂ ಅಭಿವೃದ್ದಿ ನಿಗಮ, ಬೆಂಗಳೂರು.
(7) ಖಜಾನೆ ಅಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
(8) ಮಾನ್ಯ ಸಮಾಜ ಕಲ್ಯಾಣ ಮತ್ತು ಬಂಧೀಖಾನೆ ಸಚಿವರ ಆಪ್ತಕಾರ್ಯದರ್ಶಿಗಳು,ವಿಧಾನಸೌಧ,ಬೆಂಗಳೂರು
(9) ಸರ್ಕಾರದ ಪ್ರಧಾನ ಕಾರ್ಯದರ್ಶಿರವರ ಆಪ್ತಕಾರ್ಯದರ್ಶಿಗಳು,ಸ.ಕ.ಇ.ವಿಕಾಸ ಸೌಧ. ಬೆಂಗಳೂರು.
(10)ಸರ್ಕಾರದ ಉಪಕಾರ್ಯದರ್ಶಿ-2 ರವರ ಆಪ್ತ ಸಹಾಯಕರು,ಸ.ಕ.ಇ.ಬೆಂಗಳೂರು.
(11)ಸರ್ಕಾರದ ಅಧೀನ ಕಾರ್ಯದರ್ಶಿ-2 ರವರ ಆಪ್ತ ಸಹಾಯಕರು,ಸ.ಕ.ಇ.ಬೆಂಗಳೂರು
(12)ಶಾಖಾ ರಕ್ಷಾ ಕಡತ: ಬಿಡಿ ಪ್ರತಿಗಳು.